# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 386(534)
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 19.02.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ 10-15 ವರ್ಷಗಳಿಂದ ಅತಿಥಿ ಶಿಕ್ಷಕರು/ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವವರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಶಾಲಾ ಶಿಕ್ಷಣ ಇಲಾಖೆಯಲ್ಲಿ ಸರ್ಕಾರಿ ಪ್ರಾಥಮಿಕ,ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ತಾತ್ಕಾಲಿಕವಾಗಿ ಗೌರವ ಸಂಭಾವನೆ ಪಾವತಿಸುವ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ. |
| ಆ | ಸದರಿಯವರಿಗೆ ಯಾವುದೇ ರಜೆ ಸೌಲಭ್ಯಗಳು ಹಾಗೂ ಸೇವಾ ಭದ್ರತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ | ಗ್ರಾಮೀಣ ಪ್ರದೇಶದಲ್ಲಿ ಅತಿಥಿ ಶಿಕ್ಷಕರು/ಉಪನ್ಯಾಸಕರ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ |
| ಈ | ಬಂದಿದ್ದಲ್ಲಿ, ಸದರಿಯವರಿಗೆ ಗೌರವಧನ ಹೆಚ್ಚಳ, ರಜೆ ಸೌಲಭ್ಯ ಹಾಗೂ ಸೇವಾ ಭದ್ರತೆಯನ್ನು ಯಾವ ಕಾಲಮಿತಿಯಲ್ಲಿ ನೀಡಲಾಗುವುದು? | ಸರ್ಕಾರದ ಆದೇಶ ಸಂಖ್ಯೆ: ಇಪಿ 14 ಎಸ್‌ಇಎಸ್ 2022,ದಿನಾಂಕ:18.06.2022ರನ್ವಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಅತಿಥಿ ಶಿಕ್ಷಕರುಗಳಿಗೆ ಮಾಸಿಕ ರೂ. 7,500/- ದಿಂದ ರೂ.10,000/-ಗಳು ಮತ್ತು ಸರ್ಕಾರಿ ಪ್ರೌಢಶಾಲೆಗಳಲ್ಲಿನ ಅತಿಥಿ ಶಿಕ್ಷಕರುಗಳಿಗೆ ಮಾಸಿಕ ರೂ. 8000/- ರಿಂದ ರೂ.10,500/-ಗಳವರೆಗೆ ಗೌರವ ಸಂಭಾವನೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.<br>ಸರ್ಕಾರದ ಆದೇಶ ಸಂಖ್ಯೆ: ಇಪಿ 166 ಎಸ್‌ಇಎಸ್2023 (ಭಾಗ-1) ದಿನಾಂಕ:14.02.2024 ರನ್ವಯ ರಾಜ್ಯದ ಸರ್ಕಾರಿ ಪೂರ್ವ ಪ್ರಾಥಮಿಕ ಶಾಲೆ-ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ (ಎಲ್.ಕೆ.ಜಿ/ಯು.ಕೆ.ಜಿ) ಅತಿಥಿ ಶಿಕ್ಷಕರಿಗೆ ಗೌರವ ಸಂಭಾವನೆ ರೂ.7,500/- ದಿಂದ ಪರಿಷ್ಕರಿಸಿ 10,000/-ರೂಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ. |

| | | |
|---|---|---|
| | | ಸರ್ಕಾರಿ ಆದೇಶ ಸಂಖ್ಯೆ:ಇಪಿ 50 ಡಿಜಿಡಿ 2022, ದಿನಾಂಕ:05.07.2022ರನ್ವಯ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ನೇಮಕಾತಿ ಮಾಡಿಕೊಳ್ಳಲಾಗುವ ಅತಿಥಿ ಉಪನ್ಯಾಸಕರಿಗೆ ಗೌರವ ಸಂಭಾವನೆ ರೂ.9,000/- ದಿಂದ ಪರಿಷ್ಕರಿಸಿ 12,000/-ರೂಗಳಿಗೆ ಹೆಚ್ಚಿಸಿ ಗೌರವಧನವನ್ನು ಪಾವತಿಸಲಾಗುತ್ತಿದೆ.<br>ಪ್ರಾಥಮಿಕ,ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಅಂದರೆ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಅಥವಾ ನೇರ ನೇಮಕಾತಿಯಿಂದ/ವರ್ಗಾವಣೆಯಿಂದ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಗೌರವ ಸಂಭಾವನೆ ಪಾತಿಸುವ ಆಧಾರದ ಮೇಲೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ.<br>ಬೋಧಕ ಹುದ್ದೆಗಳನ್ನು ಭರ್ತಿ ಮಾಡಿದ ಕೂಡಲೇ ಅತಿಥಿ ಶಿಕ್ಷಕರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುವುದು. ಆದ್ದರಿಂದ ಅತಿಥಿ ಶಿಕ್ಷಕರಿಗೆ/ಉಪನ್ಯಾಸಕರಿಗೆ ಸೇವಾ ಭದ್ರತೆ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ. |

ಇಪಿ 59 ಎಸ್‌ಇಎಸ್ 2024

(ಎಸ್ ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು